ರಾಯಚೂರಿನ ಸಿಂಧನೂರಿನಲ್ಲಿ ಬಸ್ ನಿಲ್ದಾಣದ ಕಟ್ಟಡ ಕಾಮಗಾರಿ ಕುರಿತು.

430 (384) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದ ಕಟ್ಟಡ ಕಾಮಗಾರಿಯು ಯಾವಾಗ ಪ್ರಾರಂಭವಾಯಿತು.

ಆ) ಸಿಂಧನೂರಿನಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದ ಕಟ್ಟಡ ಕಾಮಗಾರಿಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಕಾಮಗಾರಿಯು ಸ್ಥಗಿತಗೊಳ್ಳಲು ಕಾರಣ ಗಳೇನು; ವಿವರಗಳನ್ನು ನೀಡುವುದು;

ಈ) ಬಸ್ ನಿಲ್ದಾಣದ ಕಾಮಗಾರಿಗಾಗಿ ಸರ್ಕಾರ ನಿಗಧಿಪಡಿಸಿದ್ದ ಅನುದಾನದ ಮೊತ್ತ ಎಷ್ಟು, ಬಿಡುಗಡೆಯಾಗಿರುವ ಅನುದಾನದ ಮೊತ್ತ ಎಷ್ಟು ವಿವರಗಳನ್ನು ನೀಡುವುದು;

ಉ) ಈ ಬಸ್ ನಿಲ್ದಾಣದ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ;

ಊ) ಹಾಗಿದ್ದಲ್ಲಿ, ಯಾವಾಗ ಪೂರ್ಣಗೊಳಿಸುವುದು?

ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು) :

ಅ) ದಿನಾಂಕ: 19/8/2008.

ಆ) ಹೌದು.

ಇ) ಈ ಕಾಮಗಾರಿಯ ಗುತ್ತಿಗೆದಾರರು ನಿಗದಿತ ಪ್ರಗತಿಯನ್ನು ನಿಗದಿತ ಅವಧಿಯಲ್ಲಿ ನೀಡುವಲ್ಲಿ ವಿಫಲರಾಗಿದ್ದರಿಂದ ಸದರಿ ಗುತ್ತಿಗೆ ದಾರರಿಗೆ ಅನೇಕ ಬಾರಿ ನೋಟೀಸ್ ಜಾರಿ ಮಾಡಿದ್ದರೂ ಸಹ ಕೇವಲ 235 ಲಕ್ಷ ರೂ.ಗಳ ಕಾಮಗಾರಿಯನ್ನು ಮಾತ್ರ ಕೈಗೊಂಡಿದ್ದು, ಪಿ.ಡಬ್ಲ್ಯೂ.ಜಿ–65 ರ ಪ್ರಕಾರ ನಿಗದಿತ ಪ್ರಗತಿಯನ್ನು ನಿಗದಿತ ಅವಧಿಯಲ್ಲಿ ಸಾಧಿಸಲು ವಿಫಲರಾದ ಕಾರಣ ಸದರಿಯವರ ಟೆಂಡರ್‌ನ್ನು ದಿನಾಂಕ: 16/9/2009 ರಂದು ರದ್ದುಪಡಿಸಿ ಮರು ಟೆಂಡರ್ ಕರೆಯಲಾಗಿದೆ.

ಈ) ಈ ಬಸ್ ನಿಲ್ದಾಣದ ಕಾಮಗಾರಿಗಾಗಿ ನಿಗದಿಪಡಿಸಿದ ಮೊತ್ತ 250.00 ಲಕ್ಷ ರೂ.ಗಳು.

ಈ ಕಾಮಗಾರಿಗೆ ಇಲ್ಲಿಯವರೆಗೆ ವೆಚ್ಚ ಮಾಡಲಾದ ಮೊತ್ತ 23.50 ಲಕ್ಷ ರೂ.ಗಳು.

ಊ) ಈ ಕೆಲಸವನ್ನು ಪೂರ್ಣಗೊಳಿಸಲು ಮಳೆಗಾಲ ಹೊರತು ಪಡಿಸಿ 12 ತಿಂಗಳುಗಳ ಕಾಲಮಿತಿಯನ್ನು ಮರು ಟೆಂಡರ್‌ನಲ್ಲಿ ನಿಗದಿ ಪಡಿಸಲಾಗಿದೆ.

ಋ) ಈ ಕೆಲಸವನ್ನು ನವೆಂಬರ್–2011ರೊಳಗೆ ಪೂರ್ಣ ಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಅಂಗನವಾಡಿ ಕೇಂದ್ರಗಳ ಬಗ್ಗೆ

431 (931) ಶ್ರೀ ನರೇಂದ್ರ ಬಾಬು.ನೆ.ಲ. (ಮಹಾಲಕ್ಷ್ಮಿ ಲೇಔಟ್) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಾಲಕ್ಷ್ಮಿ ಬಡಾವಣೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ ಹಾಗೂ ಸದರಿ ಕೇಂದ್ರಗಳಿಗೆ ಸ್ವಂತ ಕಟ್ಟಡವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಅವು ಯಾವುವು;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಯಾವ ಕ್ರಮ ತೆಗೆದುಕೊಂಡಿದೆ;

ಇ) ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕಾಗಿ ಕಾಯ್ದಿರಿಸಿರುವ ಅನುದಾನ ಎಷ್ಟು;

ಶ್ರೀ ಪಿ.ಎಂ.ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಮಹಾಲಕ್ಷ್ಮಿ ಬಡಾವಣೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 27 ಅಂಗನವಾಡಿ ಕೇಂದ್ರಗಳಿವೆ ಇವುಗಳಲ್ಲಿ 24 ಕೇಂದ್ರಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅವುಗಳ ವಿವರವನ್ನು ಅನುಬಂಧದಲ್ಲಿ ಒದಗಿಸಿದೆ.

ಆ) ನಿವೇಶನ ಮತ್ತು ಅನುದಾನದ ಲಭ್ಯತೆಯ ಮೇರೆಗೆ ಹಂತ ಹಂತವಾಗಿ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ.

ಇ) ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಇಲಾಖಾ ವಂತಿಗೆಯ ಕಟ್ಟಡ ನಿರ್ಮಿಸಲು 469.70 ಲಕ್ಷಗಳನ್ನು ನಬಾರ್ಡ್ ಸಹಾಯ ಅನುದಾನದಿಂದ